ಮಹಾನ್ ವ್ಯಕ್ತಿಗಳ ಜಯಂತಿಗಳು ಕೇವಲ ಆಯಾ ಜಾತಿ, ಜನಾಂಗ ಮತ್ತು ಧರ್ಮಗಳಿಗೆ ಸೀಮಿತವಾಗಿರುವುದಿಲ್ಲ. ದಾರ್ಶನಿಕರು ನೀಡಿರುವ ಸಂದೇಶಗಳು ಸಾರ್ವಕಾಲಿಕ ಸತ್ಯ.
● **ರೂಪಕಲಾಶಶಿಧರ್** ಕೆಜಿಎಫ್ ಶಾಸಕಿ

ಕನ್ನಡಪ್ರಭ
ಶನಿವಾರ 18.01.2025

ಸುದ್ದಿ ಸಿಂಚನ

ವಿಎಸ್‌ಎಸ್‌ಎನ್ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ

ಬಂಗಾರಪೇಟೆ: ಚಿಕ್ಕ ಅಂಕಂಡಹಳ್ಳಿ ವಿವಿದೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರ ಸಂಘದ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ಸಿ.ಆರ್‌ಆರವಿಂದ್ ಕುಮಾರ್ ಮತ್ತು ಉಪಾಧ್ಯಕ್ಷರಾಗಿ ಚಿನ್ನಪ್ಪ ಗುರುವಾರ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ಸಿ.ಆರ್‌ಆರವಿಂದ್ ಕುಮಾರ್‌ಹಾಗು ಕುಪ್ಪನಹಳ್ಳಿ ಮುನಿರೆಡ್ಡಿ ನಾಮಪತ್ರ ಸಲ್ಲಿಸಿದ್ದು ಮತ್ತು ಉಪಾಧ್ಯಕ್ಷರಾಗಿ ಚಿನ್ನಪ್ಪ ಅವರು ಒಬ್ಬರೇ ನಾಮಪತ್ರವನ್ನು ಸಲ್ಲಿಸಿದ್ದರು. ಬಳಿಕ ಕುಪ್ಪನಹಳ್ಳಿ ಮುನಿರೆಡ್ಡಿ ನಾಮಪತ್ರವನ್ನು ವಾಪಸ್ ಪೆಡೆದ ಕಾರಣ ಇಬ್ಬರೂ ಅವರೋಧವಾಗಿ ಆಯ್ಕೆಯಾದರು. ನಂತರ ಸಿ.ಆರ್ ಆರವಿಂದ್ ಕುಮಾರ್‌ಮಾತನಾಡಿ, ಈ ಸಹಕಾರ ಸಂಘವು ತಾಲ್ಲೂಕಿನಲ್ಲೇ ಅತಿ ದೊಡ್ಡ ವಿವಿದೋ ದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರ ಸಂಘ ವಾಗಿದ್ದು ಸಂಘದಿಂದ ರೈತರಿಗೆ ಸಿಗುವ ಎಲ್ಲಾ ಸೌಲಭ್ಯ ಗಳನ್ನು ದೊರೆಯುವಂತೆ ಶ್ರಮಿಸುವ ಭರವಸೆ ನೀಡಿದರು.

ಅಕ್ರಮ ಗೋಮಾಂಸ ವಶ

ಗೌರಿಬಿದನೂರು: ತಾಲೂಕಿನ ಅಲ್ಲೀಪುರದಿಂದ ಅಕ್ರಮ ವಾಗಿ ಗೋಮಾಂಸವನ್ನು ಸಾಗಿಸುತ್ತಿದ್ದ ಕ್ವಾಲೀಸ್ ವಾಹನ ಮತ್ತು ಗೋಮಾಂಸವನ್ನು ಮಂಚೇನಹಳ್ಳಿ ಪೊಲೀಸರು ವಶಪಡಿಸಿಕೊಂಡಿದ್ದಾರೆ. ತಮಗೆ ದೊರೆದ ಖಚಿತ ಮಾಹಿತಿಯನ್ನು ಆಧರಿಸಿ ಮಂಚೇನಹಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ಪಿ.ಮೂರ್ತಿ ತಮ್ಮ ಸಿಬ್ಬಂದಿಯೊಂದಿಗೆ ಅಲ್ಲೀಪುರ ಪುಲಗಾನಹಳ್ಳಿ ರಸ್ತೆಯಲ್ಲಿ ವಾಹನಗಳನ್ನು ತಪಾಸಣೆ ಮಾಡುತ್ತಿದ್ದ ಸಂಧರ್ಭದಲ್ಲಿ, ಪೊಲೀಸರನ್ನು ಕಂಡ ಗೋಮಾಂಸ ಸಾಗಾಣಿಕೆದಾರರು ವಾಹನವನ್ನು ಬಿಟ್ಟು ಪರಾರಿಯಾಗಿದ್ದಾರೆ. ಪೊಲೀಸರು ವಾಹನವನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸಿದಾಗ ವಾಹನದಲ್ಲಿ ಸುಮಾರು 1200ಕೆ.ಜಿ. ಗೋಮಾಂಸ ಪತ್ತೆಯಾಗಿದೆ.

ಗಣಿತ ಕ್ಷೇತ್ರಕ್ಕೆ ಭಾರತದ ಕೊಡುಗೆ ಅಪಾರ

ರಾಷ್ಟ್ರೀಯ ಗಣಿತ ದಿನಾಚರಣೆಗೆ ಚಾಲನೆ ನೀಡಿದ ಪ್ರೊ.ಮಹದೇವನಾಯಕ್ | ಗಣಿತ ಕ್ಷೇತ್ರಕ್ಕೆ ಸೊನ್ನೆ ರಾಮಾನುಜನ್ ಕೊಡುಗೆ

● **ಕನ್ನಡಪ್ರಭ ವಾರ್ತೆ** ಕೋಲಾರ

ಗಣಿತ ಕ್ಷೇತ್ರಕ್ಕೆ ರಾಮಾನುಜನ್, ಆರ್ಯಭಟ, ಬ್ರಹ್ಮಗುಪ್ತ, ಭಾಸ್ಕರಾಚಾರ್ಯರಂತಹಗಣಿತಜ್ಞರನ್ನು ಭಾರತಕೊಡುಗೆಯಾಗಿನೀಡಿದೆಎಂದು ಬೆಂಗಳೂರು ನಗರ ವಿವಿ ನಿವೃತ್ತ ಗಣಿತ ಪ್ರಾಧ್ಯಾಪಕ ಪ್ರೊ.ಎಂ. ಎಸ್.ಮಹದೇವನಾಯಕ್ ತಿಳಿಸಿದರು.

ಬೆಂಗಳೂರು ಉತ್ತರ ವಿವಿಯ ಮಂಗಸಂದ್ರ ಸ್ನಾತಕೋತ್ತರಕೇಂದ್ರದ ಗಣಿತಶಾಸ್ತ್ರವಿಭಾಗದಿಂದ ನಡೆದ ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಗತ್ತಿಗೆ 'ಸೊನ್ನೆ' ಕೊಡುಗೆ: ಜಗತ್ತಿನ ಗಣಿತ ಕ್ಷೇತ್ರಕ್ಕೆ ಸೊನ್ನೆಯನ್ನು ಕೊಡುಗೆಯಾಗಿ ನೀಡಿದ ಭಾರತ ಮುಂಚೂಣಿಯಲ್ಲಿದೆ ಎಂದ ಅವರು, ಭಾರತದವರಾದ ರಾಮಾನುಜನ್ ಅವರ ಹುಟ್ಟುಹಬ್ಬವನ್ನು ಭಾರತ ಮಾತ್ರವಲ್ಲ ಇಂದು ಇಡೀ ವಿಶ್ವವೇ ಆಚರಿಸುತ್ತಿದೆ, ಕೇಂಬ್ರಿಡ್ಜ್ ವಿವಿಯಲ್ಲಿ ಈ ದಿನಕ್ಕೆ ಅತ್ಯಂತ ಮಹತ್ವವನ್ನು ನೀಡಲಾಗಿದೆ ಎಂದರು.

ರಾಮಾನುಜನ್ ಅವರ ಜೀವನ ಚರಿತ್ರೆ, ಅವರ ಬದುಕಿನ ಕುರಿತು ವಿದ್ಯಾರ್ಥಿಗಳಿಗೆ 'ರಾಮಾನುಜನ್ ಪ್ರಸೆಂಟೇಷನ್‌ಮೂಲಕತಿಳಿಸಿಕೊಟ್ಟಅವರು, ಭಾರತ ಗಣಿತ ಕ್ಷೇತ್ರದಲ್ಲಿನ ಈ ಸಾಧನೆ ಇಂದು ವಿಶ್ವದಲ್ಲೇ ಭಾರತವನ್ನು ಮೊದಲ ಸ್ಥಾನದಲ್ಲಿ ನಿಲ್ಲಿಸಿದೆ ಎಂದರು.

ಕೋಲಾರದ ಬೆಂಗಳೂರು ಉತ್ತರ ವಿವಿಯಲ್ಲಿ ಗಣಿತ ದಿನಾಚರಣೆ ಕಾರ್ಯಕ್ರಮವನ್ನು ಬೆಂಗಳೂರು ನಗರವಿವಿಯ ಗಣಿತಶಾಸ್ತ್ರ ನಿವೃತ್ತ ಪ್ರಾಧ್ಯಾಪಕ ಪ್ರೊ.ಮಹದೇವ ನಾಯಕ್ ಉದ್ಘಾಟಿಸಿದರು.

ಗಣಿತ ಸ್ಫೂತಿ ಇದ್ದಂತೆ: ಗಣಿತವನ್ನು ಸರಳಗೊಳಿಸಿ ವಿಶ್ವಖ್ಯಾತಿಯಾದ 'ರಾಮಾನುಜನ್ಸ್ ಕ್ರೇಜಿ ಕ್ಯಾಲುಕೇಷನ್ಸ್ ಅಂಡ್ ಬೆಸೆಲ್ ಪ್ರಾಬ್ಲಂ' ವಿಷಯದ ಕುರಿತು ಮಾಹಿತಿ ನೀಡಿದ ಅವರು, ಗಣಿತವನ್ನು ನೀವು ಸ್ಫೂರ್ತಿಯಾಗಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಗಣಿತ ವಿಶ್ವದ ಶೈಕ್ಷಣಿಕ ವ್ಯವಸ್ಥೆಯಲ್ಲಿ ನರವ್ಯೂಹವಿದ್ದಂತೆ ಎಂದ ಅವರು, ಗಣಿತವನ್ನು ಪ್ರೀತಿಸಿ, ಗೌರವಿಸಿ, ನಾನು ಒಬ್ಬ ರಾಮಾನುಜನ್ ಆಗಬೇಕು ಎಂಬ ಸ್ಫೂರ್ತಿಯಿಂದ ಮುನ್ನಡೆಯಿರಿ ಎಂದು ಪಿಜಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಗಣಿತ ಶಿಕ್ಷಣ ಪಡೆದವರಿಗೆ ಇಂದು ಅತಿ ಹೆಚ್ಚಿನ ಉದ್ಯೋಗಾವಕಾಶಗಳು ಲಭ್ಯವಿದೆ ಎಂದ ಅವರು ಕಂಪನಿಗಳಲ್ಲಿ ಮಾತ್ರವಲ್ಲ, ಅಂತರರಾಷ್ಟ್ರೀಯ ಗುಣಮಟ್ಟದ ಶಿಕ್ಷಣ ನೀಡುವ ಶಾಲೆಯಲ್ಲೂ ಎಂಎಸ್ಸಿ ಗಣಿತ ಮಾಡಿದವರಿಗೆ ಬೇಡಿಕೆ ಇದೆ. ಗಣಿತ ಐಸೋಲೇಟೇಡ್ ವಿಷಯವಲ್ಲ, ಇದು ವಿಜ್ಞಾನ, ಅರ್ಥಶಾಸ್ತ್ರ ಸೇರಿದಂತೆ ಎಲ್ಲಾ ವಿಷಯಗಳೊಂದಿಗೆ ಸಂಬಂಧ ಹೊಂದಿದೆ ಎಂದರು.

ಗಣಿತಸುಲಭವಾಗಿಸಿಕೊಳ್ಳಿ: ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬೆಂಗಳೂರು ಉತ್ತರ ವಿವಿಯ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಪ್ರೊ.ಡಿ. ಕುಮುದಾ, ಶೇ.56 ರಷ್ಟು ಯುವಕರಿಗೆ ಅಗತ್ಯವಾದ ಗುಣಮಟ್ಟದ ಶಿಕ್ಷಣ, ಕೌಶಲ್ಯ ನೀಡುವುದು ಬಹುದೊಡ್ಡ ಸವಾಲಾಗಿದ್ದು, ಅಂತಹ ಹೊಣೆಯನ್ನು ವಿಶ್ವವಿದ್ಯಾಲಯಗಳು ನಿರ್ವಹಿಸಲಿವೆ, ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಬದುಕು ಕಲಿಸುವ ಕೆಲಸವೂ ಆಗಬೇಕಿದೆ ಗಣಿತನಿಮ್ಮ ಬದುಕಿಗೆ ದಾರಿದೀಪವಾಗಲಿ ಎಂದು ಈ ವಿಶೇಷ ಉಪನ್ಯಾಸ ವಿವಿ ಏರ್ಪಡಿಸಿದ್ದು, ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ಬಹುಮಾನವಿತರಣೆ: ಗಣಿತದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಪ್ರಬಂಧಸ್ಪರ್ಧೆಯಲ್ಲಿ ವಿಜೇತರಾದ ಸ್ನಾತಕೋತ್ತರ ಕೇಂದ್ರದ ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಗಣಿತ ವಿಭಾಗದ ದ್ವಿತೀಯ ವರ್ಷದ ವಿದ್ಯಾರ್ಥಿಗಳು ಕಾರ್ಯಕ್ರಮ ಆಯೋಜನೆ ಮಾಡಿದ್ದರು. ಕಾರ್ಯಕ್ರಮದಲ್ಲಿ ಗಣಿತ ಶಾಸ್ತ್ರ ವಿಭಾಗದ ಸಂಯೋಜಕ ಜೆ.ಎಂ.ಶಿವರಾಜ್ ಸ್ವಾಗತಿಸಿದ ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಸಿ.ಎಸ್.ಶ್ರೀಲತಾ, ದಾಕ್ಷಾಯಿಣಿ, ನಾಗಾರ್ಜುನ್ ಇದ್ದರು. ಪೂಜಶ್ರೀ ತಂಡ ಪ್ರಾರ್ಥಿಸಿ, ವಿದ್ಯಾರ್ಥಿ ಸಾದಿಕ್‌ಬಾಬಾ ನಿರೂಪಿಸಿದರು.

ದ್ವಿಚಕ್ರ ವಾಹನ ಕಳವು: ಇಬ್ಬರ ಬಂಧನ

ಬಂಗಾರಪೇಟೆ: ವಿವಿದೆಡೆಗಳಲ್ಲಿ ನಡೆದಿದ್ದ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿರುವ ಇಬ್ಬರು ಆರೋಪಿಗಳನ್ನು ಬಂಧಿಸಿ, ಅವರಿಂದ ಸುಮಾರು ರೂ.6.40 ಲಕ್ಷ ಮೌಲ್ಯದ 06 ದ್ವಿಚಕ್ರ ವಾಹನಗಳನ್ನು ಬೂದಿಕೋಟೆ ಪೊಲೀಸರು ವಶಪಡಿಸಿಕೊಂಡಿದ್ದಾರೆ. ತಾಲೂಕಿನ ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್‌ಐ ಸುನೀಲ್ ಐರೋಡಗಿ ನೇತೃತ್ವದಲ್ಲಿ ಆರೋಪಿಗಳನ್ನು ಬಂಧಿಸಿದ್ದು ತಮಿಳುನಾಡು ರಾಜ್ಯದ ವಾಸಿಗಳಾದ ಸಲ್ಮಾನ್ ಮೆಹಬೂಬ್ ಮತ್ತು ಸತೀಶ್‌ಕುಮಾರ್ ಎಂಬುವವರೇ ಬಂಧಿತ ಆರೋಪಿಗಳು. ಈ ಕಾರ್ಯಾಚರಣೆಯಲ್ಲಿ ಪಿಎಸ್‌ಐ ಜತೆ ಭಾಗವಹಿಸಿದ ಸಿಬ್ಬಂದಿ ವಿಜಯಕುಮಾರ್.ಎಸ್, ಅಮರೇಶ್ ಎನ್.ವಿ.ಪ್ರಭಾಕರ್, ಶ್ರೀಕಾಂತ್‌ಹರಿಜನ, ಚಂದ್ರಶೇಖರ್ ಕೆ.ಎಂ, ವೆಂಕಟೇಶ ಟಿ, ಮಂಜುನಾಥ ಬಿ.ಆರ್‌ರವರ ಉತ್ತಮ ಕೆಲಸವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಂ.ಶಾಂತರಾಜು ಅವರು ಪ್ರಶಂಶಿಸಿದ್ದಾರೆ.

ಮಹಾನ್ ವ್ಯಕ್ತಿಗಳ ಜಯಂತಿ ಯಾವುದೇ ಧರ್ಮಕ್ಕೆ ಸೀಮಿತವಲ್ಲ

ಅಂಬಿಗರ ಚೌಡಯ್ಯ ಜಯಂತಿ ಪೂರ್ವಭಾವಿ ಸಭೆಯಲ್ಲಿ ಶಾಸಕಿ

● **ಕನ್ನಡಪ್ರಭ ವಾರ್ತೆ** ಕೆಜಿಎಫ್

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲೂಕು ಆಡಳಿತದ ವತಿಯಿಂದ ಆಚರಿಸಲಾಗುವ ಮಹಾನ್ ವ್ಯಕ್ತಿಗಳ ಜಯಂತಿಗಳು ಕೇವಲ ಆಯಾ ಜಾತಿ, ಜನಾಂಗ ಮತ್ತು ಧರ್ಮಗಳಿಗೆ ಸೀಮಿತವಾಗಿರುವುದಿಲ್ಲ, ದಾರ್ಶನಿಕರು ನೀಡಿರುವ ಸಂದೇಶಗಳು ಸಾರ್ವಕಾಲಿಕವಾಗಿದ್ದು, ಸರ್ವ ಧರ್ಮಗಳಿಗೂ ಪ್ರಸ್ತುತವಾಗಿವೆ ಎಂದು ಶಾಸಕಿ ರೂಪಕಲಾ ಶಶಿಧರ್ ತಿಳಿಸಿದರು.

ತಾಲೂಕು ಆಡಳಿತ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಬಿಗರ ಚೌಡಯ್ಯ ಜಯಂತಿ, ಗಣರಾಜ್ಯೋತ್ಸವ ಕಾರ್ಯಕ್ರಮಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಪ್ರತಿ ವರ್ಷದಂತೆ ಈ ಬಾರಿ ಮಹನೀಯರ ಜಯಂತಿಗಳನ್ನು ವಿಜೃಂಭಣೆಯಿಂದ ನಡೆಸಲಾಗುವುದು ಎಂದರು.

ನಗರಸಭೆ ಮೈದಾನದಲ್ಲಿ ಕಾರ್ಯಕ್ರಮ: ಗಣರಾಜ್ಯೋತ್ಸವದಿನದಂದು ಬೆಳಗ್ಗೆ 9 ಗಂಟೆಗೆ ನಗರಸಭೆ ಮೈದಾನದಲ್ಲಿ ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಂದ ಧ್ವಜಾರೋಹಣ, ನಂತರ ಪಥಸಚಲನ, ಕ್ರೀಡಾಕ್ರಮದಲ್ಲಿ ಪೊಲೀಸ್ ಪಡೆಗಳು, ಗೃಹರಕ್ಷಕ ದಳ, ಸ್ಕೌಟ್ಸ್ ಅಂಡ್ ಗೈಡ್ಸ್, ಎನ್‌ಸಿಸಿ ಕೆಡೆಟ್‌ಗಳನ್ನು ಆಹ್ವಾನಿಸಲು ಸೂಚಿಸಲಾಯಿತು. ಧ್ವಜಾರೋಹಣ ವ್ಯವಸ್ಥೆ ಮಾಡಲು ಪೊಲೀಸ್ ಇಲಾಖೆ, ತಹಶೀಲ್ದಾರ್ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಲಾಯಿತು. ಕ್ರಮಗಳ ಸಿದ್ದತೆಗೆ ಸಮಿತಿಗಳನ್ನು ರಚಿಸಲಾಗಿದ್ದು ಪೂರ್ವತಯಾರಿಗಾಗಿ ಉಪ ಸಮಿತಿಗಳ ಸಭೆ ಕರೆದು ಬೇಕಾಗುವ ಎಲ್ಲ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲು ಸಭೆಯಲ್ಲಿ ಸೂಚಿಸಿದರು. ಕ್ರೀಡಾಂಗಣದಲ್ಲಿ ವೇದಿಕೆನಿರ್ಮಾಣ, ಗಣ್ಯರು, ಶಾಸಕರು ಹಾಗೂ ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ, ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆ ಕೈಗೊಳ್ಳಲು ಲೋಕೊಪಯೋಗಿ ಇಲಾಖೆ, ಸಾರಿಗೆ ಇಲಾಖೆ, ಅಧಿಕಾರಿಗಳಿಗೆ ಸೂಚನೆ ನೀಡಿದರು. ಕ್ರೀಡಾಂಗಣದಲ್ಲಿ ಆಸನವ್ಯವಸ್ಥೆಯನ್ನು ನಗರಸಭೆ ಮತ್ತು ತಾಲೂಕು ಪಂಚಾಯಿತಿ ಹಾಗೂ ಇತರೆ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ತಹಶೀಲ್ದಾರ್ ನಾಗವೇಣಿ, ಇ.ಓ.ಮಂಜುನಾಥ ಹರ್ತಿ, ಬಿಇಒ ಸಯಿದಾ ಬಾನು, ಸಿಡಿಪಿಓ ರಾಜೇಶ್, ವೃತ್ತ ನೀರಿಕ್ಷಕ ಮಾರ್ಕೋಂಡಯ್ಯ, ಉಪನೊಂದಣಾಧಿಕಾರಿ ಗಿರೀಶ್ ಇದ್ದರು.

ಕೆಜಿಎಫ್‌ನಲ್ಲಿ ನಡೆದ ಗಣರಾಜ್ಯೋತ್ಸವ ಕುರಿತ ಪೂರ್ವಭಾವಿ ಸಭೆ.

ನಾಳೆ ಗ್ರೂಪ್-ಬಿ ಹುದ್ದೆ ಪರೀಕ್ಷೆ: ಸಮರ್ಪಕ ವ್ಯವಸ್ಥೆಗೆ ಸೂಚನೆ

ಚಿಕ್ಕಬಳ್ಳಾಪುರ: ವಿವಿಧ ಇಲಾಖೆಗಳ ಗ್ರೂಪ್-ಬಿ ಮೂಲ ವೃಂದದಲ್ಲಿ ಹುದ್ದೆಗಳ ನೇಮಕಾತಿ ಪೂರ್ವಭಾವಿ ಪರೀಕ್ಷೆಯು ಜ.19 ಮತ್ತು 25 ರಂದು ರಾಜ್ಯಾದ್ಯಂತ ನಡೆಯುತ್ತಿದ್ದು, ಸದರಿ ಪರೀಕ್ಷೆಯು ಜಿಲ್ಲೆಯಲ್ಲಿಯೂ ಯಾವುದೇ ಲೋಪದೋಷವಾಗದಂತೆ ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ನಿಗಾವಹಿಸಿ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಪರೀಕ್ಷಾ ಕರ್ತವ್ಯಕ್ಕೆ ನೇಮಿಸಲ್ಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪರೀಕ್ಷೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರೀಕ್ಷೆಯನ್ನು ಚಿಕ್ಕಬಳ್ಳಾಪುರ ನಗರದ 12 ಪರೀಕ್ಷಾ ಕೇಂದ್ರಗಳಲ್ಲಿ 4,499 ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದಾರೆ. ಪರೀಕ್ಷೆ ನಡೆಯುವ ಕೊಠಡಿಗಳಲ್ಲಿ ಸಮರ್ಪಕ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು. ಸಭೆಯಲ್ಲಿ ಅಪರ ಡೀಸಿ ಡಾ. ಎನ್ ಭಾಸ್ಕರ್, ಉಪ ಪೊಲೀಸ್ ವರಿಷ್ಠ ಶಿವಕುಮಾರ್, ವಿಷಯ ಪರೀವಿಕ್ಷಕ ಜಮೀರ್‌ಪಾಷ, ಪ್ರಾಂಶುಪಾಲರು ಇದ್ದರು.

ಯುವಕರಿಂದ ಭಜನೆ ಜಾಗೃತಿ

ಚನ್ನಪಟ್ಟಣ: ಇಂದಿನ ಆಧುನಿಕತೆ ಮತ್ತು ಜಾಗತೀಕರಣ ಹಾಗೂ ಪಾಶ್ಚಿಮಾತ್ಯ ಸಂಸ್ಕೃತಿ ಪ್ರಭಾವದಿಂದದೇಶದ ಸಂಸ್ಕೃತಿ ಸಂಪ್ರದಾಯಗಳು ಕಣ್ಮರೆಯಾಗುತ್ತಿರುವ ಈ ದಿನಗಳಲ್ಲಿ ಮಂಗಳವಾರ ಪೇಟೆಯ ಆಮರಜ್ಯೋತಿ ಬಡಾವಣೆ ಯುವಕರು ಭಜನಾ ಚಟುವಟಿಕೆಯನ್ನು ಮುಂದುವರಿಸುತ್ತಿರುವುದು ಉತ್ತಮ ಬೆಳವಣಿಗೆ.

ಧನುರ್ಲಿಸದ ಪ್ರಯುಕ್ತ ಒಂದು ತಿಂಗಳ ಕಾಲ ಮುಂಜಾನೆ ಬಡಾವಣೆಯ ಬೀದಿ ಗಳಲ್ಲಿ ಧನುರ್ಮಾಸದ ಭಜನೆ ಕಾರ್ಯಕ್ರಮ ನಡೆಸುವ ಮೂಲಕ ಹಿರಿಯರು, ಮಕ್ಕಳಲ್ಲಿ ಭಜನೆ ಕುರಿತ ಜಾಗೃತಿ ಮೂಡಿಸಿದರು.

ಬಡಾವಣೆಯಲ್ಲಿ ಒಂದು ತಿಂಗಳು ಕಾಲ ಮುಂಜಾನೆ ಮತ್ತು ಶನಿವಾರ ಬೆಳಿಗ್ಗೆ ಮತ್ತು ಸಂಜೆ ಭಜನೆ ಮಾಡಿ ಭಕ್ತಿ ಹಾಡುಗಳನ್ನು ಹಾಡುತ್ತಾ ಬೀದಿಗಳಲ್ಲಿ ಸುತ್ತಾಡಿ, ಮಕರಸಂಕ್ರಾಂತಿ ಹಬ್ಬದ ಪ್ರಯುಕ್ತ ಪ್ರತಿವರ್ಷದಂತೆ ಮುಂಜಾನೆ ಬಡಾವಣೆಯಲ್ಲಿ ಭಜನೆ ಕಾಯರ್ಕ್ರಮ ನಡೆಸಿದರು. ಚನ್ನಪಟ್ಟಣದ ಡೂಂಲೈಟ್ ವೃತ್ತದಿಂದ ಭಜನೆ ಪ್ರಾರಂಭಿಸಿ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ರಾಮದೇವರ ಪಟ ಮತ್ತು ದೀಪಸ್ತಂಭ ಹಿಡಿದು, ತಾಳ ವಾದ್ಯ ಗಳೊಂದಿಗೆ ರಾಮ ಭಜನೆ ಮಾಡಿ ಭಕ್ತಿ ಭಾವ ಮೆರೆದರು. ಅಮರಜ್ಯೋತಿ ಬಳಗದ ಶ್ರೀನಿವಾಸ್, ಸುರೇಶ್, ಉಮೇಶ್, ನಿಂಗರಾಜು, ಹರೀಶ್, ಕಿರಣ್ ಇತರರಿದ್ದರು.

ನಾಳೆ ಪಿಎಲ್‌ಡಿ ಬ್ಯಾಂಕ್ ಚುನಾವಣೆ

ಮುಳಬಾಗಿಲು: ಪಿಎಲ್‌ಡಿ ಬ್ಯಾಂಕ್‌ಗೆ 6 ನಿರ್ದೇಶಕರು ಅವಿರೋದವಾಗಿ ಆಯ್ಕೆಯಾಗಿದ್ದು ಉಳಿದ 8 ಕ್ಷೇತ್ರಗಳಿಗೆ ಜ.19 ರಂದು ಚುನಾವಣೆ ನಡೆಯ ಲಿದೆ. 8 ಕ್ಷೇತ್ರಗಳ ಪೈಕಿ ಆಲಂಗೂರು ಕ್ಷೇತ್ರ ತೀವ್ರ ಕುತೂಹಲ ಕೆರಳಿಸಿದ್ದು, ಈ ಕ್ಷೇತ್ರದಲ್ಲಿ ಒಟ್ಟು 44 ಮತದಾರರು ಇದ್ದು, ಈಗಾಗಲೇ ಎರಡೂ ಕಡೆ ಯಿಂದ ಮತದಾರರ ಓಲೈಕೆಗೆ ಮುಂದಾಗಿದ್ದಾರೆ. ಉಳಿದಂತೆ ಅಂಬ್ಲಿಕಲ್ ಸಾಮಾನ್ಯ ಕ್ಷೇತ್ರದಲ್ಲಿ ಕೋಲಾರ ಶಾಸಕ ಕೊತ್ತೂರು ಜಿ. ಮಂಜುನಾಥ್ ಚಿಕ್ಕಪ್ಪ ಜಿ.ಗಂಗಿರೆಡ್ಡಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ಕಣದಲ್ಲಿ ಇದ್ದು ಬಂಡಾಯ ಕಾಂಗ್ರೆಸ್ ಅಭ್ಯರ್ಥಿಯಾಗಿ ವಕೀಲ ಬೇವಹಳ್ಳಿ ಎಂ. ಶಂಕರಪ್ಪ ಮದ್ಯೆ ಪೈಪೋಟಿ ಏರ್ಪಟ್ಟಿದೆ. ಉಳಿದ ಕ್ಷೇತ್ರಗಳಲ್ಲೂ ತುರಿಸಿನ ಪ್ರಚಾರ ನಡೆಸಲಾಗುತ್ತಿದೆ.

ಬುದ್ಧಧ್ಯಾನ ಮಂದಿರಕ್ಕೆ ಜಾಗ ಕಲ್ಪಿಸಲು ಮನವಿ

ಮಾಲೂರು: ತಾಲೂಕಿನ ಮಡಿವಾಳ ಗ್ರಾಮದಲ್ಲಿ ಬುದ್ದ ದ್ಯಾನ ಮಂದಿರಕ್ಕೆ ಕಟ್ಟಡವನ್ನು ನೀಡಬೇಕೆಂದು ಕದಸಂಸ ಅಂಬೇಡ್ಕರ್‌ವಾದ ಸಂಘಟನೆ ಹಾಗೂ ಗ್ರಾಮಸ್ಥರು ತಹಶೀಲ್ದಾರ್ ಕೆ. ರಮೇಶ್ ಅವರಿಗೆ ಮನವಿ ಸಲ್ಲಿಸಿದರು. ಮಾಲೂರು ತಾಲ್ಲೂಕಿನಲ್ಲಿ ಕಸಬಾ ಹೋಬಳಿಯ ಮಡಿವಾಳ ಗ್ರಾಮದಲ್ಲಿ ಬುದ್ಧರ ಅನುಯಾಯಿಗಳು ಸಾಕಷ್ಟು ಇದ್ದು ಅವರಿಗೆ ದ್ಯಾನ ಮತ್ತು ಪ್ರಾರ್ಥನೆ ಮಾಡಲು ಒಂದು ಕಟ್ಟದ ಅವಶ್ಯಕತೆ ಇದೆ. ಸಾರ್ವಜನಿಕ ಗ್ರಂಥಾಲಯದ ಹಳೆಯ ಕಟ್ಟಡವು ಖಾಲಿಯಿದ್ದು, ಇದನ್ನು ಬುದ್ಧಧ್ಯಾನ ಮಂದಿರ ಮಾಡಲು ನೀಡಬೇಕೆಂದು ಸಂಘ